**ದಿನಾಂಕ 14.08.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ 2ನೇ ಎದುರುದಾರರ ಪರ ಮಾನ್ಯ ವಕೀಲರಿಂದ.**

ಆ ದಿನ ನನ್ನ ಜೊತೆಯಲ್ಲಿ ಬೇರೆ ಯಾರೂ ಇರಲಿಲ್ಲ. ಅಪಘಾತದ ಬಗ್ಗೆ ದೂರನ್ನು ನನ್ನ ಮಗ ನರಸಿಂಹಮೂರ್ತಿ ನೀಡಿರುತ್ತಾನೆ. ನನ್ನ ಮಗ ಅಪಘಾತವನ್ನು ಕಣ್ಣಾರೆ ನೋಡಿಲ್ಲ ಎಂದರೆ ಸರಿ, ಆದರೆ ಸಾರ್ವಜನಿಕರು ನನ್ನ ಮಗನಿಗೆ ತಿಳಿಸಿರುತ್ತಾರೆ. ಅಪಘಾತವಾದ ಎರಡೂವರೆ ತಿಂಗಳ ನಂತರ ದೂರನ್ನು ನೀಡಲಾಗಿದೆ ಎಂದರೆ ಸರಿ. ಆಪಾದಿತ ವಾಹನದ ಚಾಲಕ ಮತ್ತು ಮಾಲೀಕರು ಮತ್ತು ನಾನು ಒಂದೇ ಊರಿನವರು ಎಂದರೆ ಸರಿಯಲ್ಲ. ನ್ಯಾಯಾಲಯಕ್ಕೆ ಹಾಜರುಪಡಿಸಲಾದ ದಾಖಲಾತಿಗಳಲ್ಲಿ ಅಪಾದಿತ ವಾಹನದ ಚಾಲಕ, 1ನೇ ಎದುರುದಾರರು ಮತ್ತು ನನ್ನ ವಿಳಾಸ ಒಂದೇ ಇದೆ ಎಂದರೆ ಸರಿಯಲ್ಲ. 1ನೇ ಎದುರುದಾರರು ಮತ್ತು ಆಪಾದಿತ ವಾಹನದ ಚಾಲಕ ನನ್ನ ಕುಟುಂಬವರಿಗೆ ಮತ್ತು ನನಗೆ ಪರಿಚಯಸ್ಥರು ಎಂದರೆ ಸರಿ.

ಅಪಘಾತವಾದ ನಂತರ ನನ್ನನ್ನು ತುರುವೇಕೆರೆ ಸರ್ಕಾರಿ ಆಸ್ಪತ್ರೆಗೆ ನನ್ನ ಮಗ ಕರೆದುಕೊಂಡು ಹೋಗಿರುತ್ತಾರೆ. ಸದರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದ ಬಗ್ಗೆ ದಾಖಲಾತಿಯನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ಸದರಿ ಆಸ್ಪತ್ರೆಯಲ್ಲಿ ಅಪಘಾತ ಹೇಗೆ ಸಂಭವಿಸಿತು ಎಂದು ಹೇಳಿ ಬರೆಯಿಸಿದ್ದೇವೆ. ಆ ಬಗ್ಗೆ ದಾಖಲಾತಿಯನ್ನು ಹಾಜರುಪಡಿಸಿಲ್ಲ ಮತ್ತು ಹಾಜರುಪಡಿಸಲು ತೊಂದರೆ ಇಲ್ಲ ಎಂದರೆ ಸರಿ. ಸದರಿ ಆಸ್ಪತ್ರೆಯಿಂದ ಬಿಡುಗಡೆಯಾದ ನಂತರ ಸಂಜಯ್ ಗಾಂಧಿ ಆಸ್ಪತ್ರೆಗೆ ಹೋಗಿದ್ದು, ಅಲ್ಲಿಯೂ ಸಹ ಗಾಯಗಳು ಹೇಗೆ ಆಗಿರುತ್ತವೆ ಎಂದು ತಿಳಿಸಿರುತ್ತೇವೆ. ವೈದ್ಯಕೀಯ ದಾಖಲಾತಿಗಳಲ್ಲಿ ಯಾವ ವಾಹನದಿಂದ ಅಪಘಾತವಾಗಿದೆ ಎಂದು ನಮೂದಿಸಿಲ್ಲ ಎಂದರೆ ಸರಿ. ಸಂಜಯ್ ಗಾಂಧಿ ಆಸ್ಪತ್ರೆಯಿಂದ ಬಿಡುಗಡೆಗೊಂಡ ನಂತರ ದೂರು ನೀಡಲು ತೊಂದರೆ ಇರಲಿಲ್ಲ ಎಂದರೆ ಸರಿಯಲ್ಲ. ಸದರಿ ಆಸ್ಪತ್ರೆಯಿಂದ ಬಿಡುಗಡೆಗೊಂಡ ಒಂದು ತಿಂಗಳ ನಂತರ ದೂರು

ನೀಡಲು ಕಾರಣ ಏನು ಎಂದರೆ ಸಾಕ್ಷಿಯು ಬಿಡುಗಡೆಗೊಂಡ ನಂತರ ದೂರು ನೀಡಿರುತ್ತೇವೆ ಎಂದು ನುಡಿಯುತ್ತಾರೆ. ಪ್ರಮಾಣ ಪತ್ರದ ಖಂಡಿಕೆ 4 ಮತ್ತು 5 ರಲ್ಲಿ ಹೇಳಿರುವ ವಿಚಾರಗಳು ಸುಳ್ಳು ಎಂದರೆ ಸರಿಯಲ್ಲ. ಚಿಕಿತ್ಸೆಗೆ ನಾನು ಹೇಳಿರುವಷ್ಟು ಹಣವನ್ನು ಖರ್ಚು ಮಾಡಿಲ್ಲ ಎಂದರೆ ಸರಿಯಲ್ಲ. ಸಂಜಯ್ ಗಾಂಧಿ ಆಸ್ಪತ್ರೆಯಲ್ಲಿ ಬಿಪಿಎಲ್ ಪಡಿತರ ಚೀಟಿ ನೀಡಿ ಉಚಿತ ಚಿಕಿತ್ಸೆಯನ್ನು ಪಡೆದುಕೊಂಡಿದ್ದೇವೆ ಎಂದರೆ ಸರಿಯಲ್ಲ. ನಿಪಿ 6 ರ ಕ್ರಮ ಸಂಖ್ಯೆ 6,10,16,27,35 ಮತ್ತು 48ರಲ್ಲಿ ನಮೂದಿಸಿದ ಮೊತ್ತ ಮುಂಗಡವಾಗಿ ಪಾವತಿಸಿದ್ದು, ಅಂತಿಮ ಬಿಲ್ಲನ್ನು ಹಾಜರುಪಡಿಸಿಲ್ಲ ಎಂದರೆ ಸರಿ.

ಆಪಾದಿತ ವಾಹನದಿಂದ ಅಪಘಾತವಾಗಿಲ್ಲ ಮತ್ತು ಸದರಿ ವಾಹನ ಅಪಘಾತದಲ್ಲಿ ಭಾಗಿಯಾಗಿಲ್ಲ ಎಂದರೆ ಸರಿಯಲ್ಲ. ಅಪಘಾತವಾದ ಸ್ಥಳದಲ್ಲಿ ಅಂಗಡಿಗಳು ಮತ್ತು ಜನರು ಇರಲಿಲ್ಲ. ಯಾವ ವಾಹನದಿಂದ ಅಪಘಾತವಾಯಿತು ಎಂದು ನನಗೆ ಆ ಸಂದರ್ಭದಲ್ಲಿ ತಿಳಿದು ಬರಲಿಲ್ಲ ಎಂದರೆ ಸರಿಯಲ್ಲ. ಅಪಘಾತದಲ್ಲಿ ಉಂಟಾದ ಗಾಯಗಳು ಆಪಾದಿತ ವಾಹನದಿಂದ ಆಗಿಲ್ಲ ಎಂದರೆ ಸರಿಯಲ್ಲ. ನನಗೆ ಗಾಯಗಳು ಬೇರೆ ರೀತಿಯಲ್ಲಿ ಆಗಿದ್ದು, ಇದೇ ಕಾರಣದಿಂದ ತಡವಾಗಿ ದೂರು ನೀಡಲಾಗಿದೆ ಎಂದರೆ ಸರಿಯಲ್ಲ. ಆಪಾದಿತ ವಾಹನದ ಚಾಲಕ, 1ನೇ ಎದುರುದಾರರು ಮತ್ತು ಪೊಲೀಸರೊಂದಿಗೆ ಶಾಮೀಲಾಗಿ ಆಪಾದಿತ ವಾಹನದ ವಿರುದ್ದ ಸುಳ್ಳು ದೂರು ನೀಡಲಾಗಿದೆ ಎಂದರೆ ಸರಿಯಲ್ಲ. ಆಪಾದಿತ ವಾಹನಕ್ಕೂ, ಪ್ರಸ್ತುತ ಪ್ರಕರಣಕ್ಕೂ ಯಾವುದೇ ಸಂಭಂದ ಇಲ್ಲ ಎಂದರೆ ಸರಿಯಲ್ಲ.

ನಾನು ಪ್ರಕರಣ ದಾಖಲಿಸುವ ಸಂದರ್ಭದಲ್ಲಿ ಹಾಜರುಪಡಿಸಿರುವ ಆಧಾರ್ ಕಾರ್ಡಿನ ಪ್ರತಿ ನನ್ನದೇ ಆಗಿರುತ್ತದೆ. ಸದರಿ ಆಧಾರ್ ಕಾರ್ಡಿನ ಪ್ರತಿಯಲ್ಲಿ ನನ್ನ ಹುಟ್ಟಿದ ವರ್ಷವನ್ನು 1951 ಎಂದು ನಮೂದಿಸಿಲಾಗಿದೆ ಎಂರದೆ ಸರಿ. ಸದರಿ ದಾಖಲಾತಿಯಲ್ಲಿ ನಮೂದಿಸಿರುವ ಹುಟ್ಟಿದ ವರ್ಷ

ಸರಿ ಇದೆ ಎಂದರೆ ಸರಿ. 2021ನೇ ಇಸವಿಯಲ್ಲಿ ನನಗೆ 71 ವರ್ಷ ವಯಸ್ಸು ಆಗಿದ್ದ ಕಾರಣ ನಾನು ಯಾವುದೇ ಕೆಲಸ ಮಾಡುತ್ತಿರಲಿಲ್ಲ ಮತ್ತು ಆದಾಯವೂ ಸಹ ಇರಲಿಲ್ಲ ಎಂದರೆ ಸರಿಯಲ್ಲ. ನನ್ನ ಮಕ್ಕಳು ನನ್ನನ್ನು ನೋಡಿಕೊಳ್ಳುತ್ತಿದ್ದರು ಎಂದರ ಸರಿಯಲ್ಲ. ಪರಿಹಾರ ಪಡೆಯುವ ಉದ್ದೇಶದಿಂದ ಆಪಾದಿತ ವಾಹನದ ವಿರುದ್ದ ಸುಳ್ಳು ದೂರು ನೀಡಿ ಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ಪ್ರಮಾಣ ಪತ್ರ ಸಲ್ಲಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಆಧಾರ್ ಕಾರ್ಡಿನ ಮೂಲಕ ಪ್ರತಿಯನ್ನು ಹಾಜರುಪಡಿಸಲು ತೊಂದರೆ ಇಲ್ಲ ಎಂದರೆ ಸರಿ.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**